## ಪ್ರಧಾನ ಹಿರಿಯ ಸಿವಿಲ್ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ. ಹುಣಸೂರು.

## ಸಿ.ಸಿ. ಸಂಖ್ಯೆ: 391/2021

**ಸಾಕ್ಷಿಯನ್ನು ದಿಃ 08.01.2024 ರಂದು ಕರೆಸಿ ಪ್ರಮಾಣವಚನ ಬೋಧಿಸಲಾಯಿತು.**

| | | | |
|---|---|---|---|
| ಹೆಸರು | ಜುಬೇರ್ | ಸಿ.ಡಬ್ಲ್ಯೂ: 5 | ಪಿ.ಡಬ್ಲ್ಯೂ: 3 |
| ತಂದೆಯ ಹೆಸರು | ನಿಶಾರ್ ಪಾಷ | | |
| ವಯಸ್ಸು | 29 ವರ್ಷ | | |
| ಕೆಲಸ | ಹಾರ್ಡ್ ವೇರ್ ಕೆಲಸ | | |
| ವಾಸಸ್ಥಳ | ಹುಣಸೂರು | | |

## ಮುಖ್ಯ ವಿಚಾರಣೆಃ ಮಾನ್ಯ ಸಸಅ ರವರಿಂದಃ

1. ಚಾಸಾ–1,2,4,6 ರವರು ಪರಿಚಯ ಇಲ್ಲ. ಚಾಸಾ–3 ರವರು ಗೊತ್ತು. 1 ನೇ ಆರೋಪಿ ಪರಿಚಯ ಇದೆ. 2 ರಿಂದ 4 ನೇ ಆರೋಪಿತರು ನನಗೆ ಗೊತ್ತಿಲ್ಲ. ಈಗ ನೋಡುತ್ತಿರುವ ದಾಖಲೆಯಲ್ಲಿ ನನ್ನ ಸಹಿ ಇದೆ. ದಾಖಲೆ ಮಹಜರ್ ಆಗಿದ್ದು ಅದನ್ನು ಈಗಾಗಲೇ ನಿಪಿ.1 ಎಂದು, ಸಾಕ್ಷಿಯ ಸಹಿಯನ್ನು ನಿಪಿ.1(ಬಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು 2 ವರ್ಷಗಳ ಹಿಂದೆ ಲೀಲಾ ಚಿತ್ರಮಂದಿರ ಬಳಿ ಪೊಲೀಸರು ಸಹಿ ಮಾಡಲು ಹೇಳಿದ್ದಕ್ಕೆ ಸಹಿ ಮಾಡಿರುತ್ತೇನೆ. ಅದರಲ್ಲಿ ಏನು ಬರೆದಿದೆ ಬೇರೆ ಯಾರು ಸಹಿ ಮಾಡಿದ್ದಾರೆ ಗೊತ್ತಿಲ್ಲ. ನನ್ನ ಸಮಕ್ಷಮ ಪೊಲೀಸರು ಯಾವುದೇ ಮಹಜರ್ ಮಾಡಿಲ್ಲ. ಈ ಪ್ರಕರಣದ ಬಗ್ಗೆ ನನಗೆ ಏನು ಗೊತ್ತಿರುವುದಿಲ್ಲ.

**(ಈ ಹಂತದಲ್ಲಿ ಮಾನ್ಯ ಸಅಅ ಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ. ಸಾಕ್ಷಿ ತನ್ನ ಸಾಕ್ಷ್ಯವನ್ನು ಅಭಿಯೋಜನೆಗೆ ಪ್ರತಿಕೂಲವಾಗಿ ನುಡಿದಿರುವ ಕಾರಣ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಸಲಾಯಿತು)**

## ಪಾಟೀಸವಾಲುಃ ಮಾನ್ಯ ಸಸಅ ರವರಿಂದಃ

2. ದಿಃ29.12.2020 ರಂದು ಸಂಜೆ 5 ರ ಸಮಯ ಪೊಲೀಸರು ಚಾಸಾ–2 ರವರು ಸ್ಥಳ ತೋರಿಸಿದ ಮೇರೆಗೆ ಸಂಜೆ 5.00 ರಿಂದ 6.00 ರವರೆಗೆ ಮಹಜರ್ ಮಾಡಿ , ನನ್ನ ಹಾಗೂ ಚಾಸಾ–5,6 ರವರ ಸಹಿಯನ್ನು ಅದೇ ಸ್ಥಳದಲ್ಲಿ ಪಡೆದಿರುತ್ತಾರೆ

ಎಂದರೆ ಸರಿಯಲ್ಲ. ನಾನು ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀಸವಾಲುಃ ಆರೋಪಿ ಪರ ವಕೀಲರು ಇಲ್ಲವೆಂದಿದ್ದಾರೆ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು).

ಓ.ಹೇ.ಕೇ.ಸ.ಇದೆ.

(ಶಿರಿನ್ ಜಾವೀದ್ ಅನ್ಸಾರಿ)
ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು
ಜೆ.ಎಂ.ಎಫ್.ಸಿ., ಹುಣಸೂರು.